ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಖಾಲಿ ಇರುವ ಹುದ್ದೆಗಳ ಸಂಖ್ಯೆ 18.

ಆ) ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮತ್ತು ಪದೋನ್ನತಿ ಮೇಲೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸುರತ್ಕಲ್ ಕ್ಷೇತ್ರದ ಕರಂಬಾರು ಮತ್ತು ಪೆರ್ಮುದೆ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಆಸ್ಪತ್ರೆ ಮಂಜೂರಾತಿ

371 (243) ಶ್ರೀ ಕುಂಭೆ ಸುಂದರರಾವ್ (ಸುರತ್ಕಲ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸುರತ್ಕಲ್ ಕ್ಷೇತ್ರದ ಕರಂಬಾರು ಮತ್ತು ಪೆರ್ಮುದೆ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಹೊರರೋಗಿಗಳ ಆಸ್ಪತ್ರೆಯನ್ನು ತೆರೆಯುವ ಕುರಿತು ಸಾರ್ವಜನಿಕರು ಸಲ್ಲಿಸಿರುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆಯೆ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಇ) ಮೂಡುಶೆಡ್ಡೆಯಲ್ಲಿ 25 ಹಾಸಿಗೆಗಳ ಆಯುರ್ವೇದ ಆಸ್ಪತ್ರೆಯ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇದೆಯೇ?

ಈ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದು ಕೊಂಡ ಕ್ರಮಗಳೇನು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು.

ಆ) ರಾಜ್ಯದಲ್ಲಿ ಹೊಸದಾಗಿ ಆಯುರ್ವೇದ ಚಿಕಿತ್ಸಾ ಲಯಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದಲ್ಲಿದೆ.

ಇ) ಇಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಕುಡಿಯುವ ನೀರಿನ ಯೋಜನೆ

373 (959) ಶ್ರೀ ಕುನ್ನೂರು ಮಂಜುನಾಥ್ ಚೆನ್ನಪ್ಪ (ಶಿಗ್ಗಾಂವ್) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಗ್ರಾಮಾಂತರ ಕುಡಿಯುವ ನೀರಿನ ಯೋಜನೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ?

ಆ) ಹಾವೇರಿ ಜಿಲ್ಲೆಗೆ ಕುಡಿಯುವ ನೀರಿಗಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ?